# ಕರ್ನಾಟಕ ಸರ್ಕಾರ

## 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.

## ಸಿ.ಸಿ.ನಂ.738/2014

ಪಿ.ಡಬ್ಲ್ಯೂ: 5

ಸಿ.ಡಬ್ಲ್ಯೂ: 3

ಸಾಕ್ಷಿದಾರರ ಹೆಸರು : ರಮೇಶ್

ತಂದೆಯ ಹೆಸರು: : ರಂಗದಾಮಯ್ಯ

ವಯಸ್ಸು : **55 ವರ್ಷ**

ಉದ್ಯೋಗ : ವೈರಿಂಗ್ ಕೆಲಸ

ವಾಸಸ್ಥಳ : ರಂಗೇನಹಳ್ಳಿ

**ದಿನಾಂಕ:04-08-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಈಗ್ಗೆ ಸುಮಾರು ವರ್ಷಗಳ ಹಿಂದೆ ನಾನು ಲಕ್ಕವಳ್ಳಿ ಗ್ರಾಮದಲ್ಲಿ ಬೆಳಿಗ್ಗೆ 11-00 ಗಂಟೆ ಸಮಯದಲ್ಲಿ ರಸ್ತೆಯಲ್ಲಿ ಬರುತ್ತಿರುವಾಗ ಪೊಲೀಸರ ಕೋರಿಕೆಯ ಮೇರೆಗೆ ಒಂದು ದಾಖಲಾತಿಗೆ ಸಹಿ ಮಾಡಿದ್ದು, ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮದಲ್ಲಿ ಪೊಲೀಸರು ಯಾವುದೇ ವಾಹನವನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಅಮಾನತ್ತು ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-16 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-16(ಸಿ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು:** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿನಾಂಕ: 14-07-2001 ರಂದು ತರೀಕೆರೆ ತಾಲ್ಲೂಕು, ಲಕ್ಕವಳ್ಳಿ ಹೋಬಳಿ ರಂಗೇನಹಳ್ಳಿ ಗ್ರಾಮದ ಬಸ್ ನಿಲ್ದಾಣದ ಟಿ ಎಂ ರಸ್ತೆಯಲ್ಲಿ ಮಧ್ಯಾಹ್ನ 2-15 ರಿಂದ 2-45 ಗಂಟೆಯವರೆಗೆ ಅಮಾತನ್ತು ಮಹಜರ್ ಮಾಡಿದ್ದು, ಸದರಿ ಮಹಜರ್ ಗೆ ಸಹಿ ಮಾಡಿರುತ್ತೀರಾ ಎಂದರೆ ಸಾಕ್ಷಿ ಸಹಿ

ಮಾಡಿರುತ್ತೇನೆ, ಅದರಲ್ಲಿ ಬರೆದ ವಿಚಾರ ತಿಳಿದಿರುವುದಿಲ್ಲ. ಪೊಲೀಸರು ನಿಮ್ಮ ಸಮಕ್ಷಮ ಕೆಎ 1320 ಹಸಿರು ಬಣ್ಣದ ಅಂಬಾಸಿಡರ್ ಡಿಸ್ಕವರಿ ಕಾರನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿದಿರುತ್ತಾರೆ.

**ಪಾಟೀ ಸವಾಲು ಃ ಆರೋಪಿ ಪರ ವಕೀಲರಿಂದ.**

ಪಾಟೀ ಸವಾಲು ಇಲ್ಲ

**ಮರುವಿಚಾರಣೆಃ** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಕೇ. ಸ. ಇ. ಎ. ಒ.**

ಸಹಿ/-

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**